ದಿನಾಂಕ : 09-11-2023 ಓ ಎಸ್ ನಂ. 216/2020

ಪಿ. ಡಬ್ಲ್ಯೂ - 1

ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ಶ್ರೀ ಆರ ಎಸ ಕೆ ವಾದಿ ಪರ ವಕೀಲರಿಂದ

ಈ ದಿನ ನಾನು ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳ ಬಗ್ಗೆ ಮಾಹಿತಿ ಇರುತ್ತದೆ. ಸಾಕ್ಷಿ ಪ್ರಮಾಣ ಪತ್ರವನ್ನು ನಾನೇ ಹೇಳಿ ಬರೆಸಿದ್ದು ಅದನ್ನು ನಾನು ಓದಿ ತಿಳಿದುಕೊಂಡ ನಂತರ ಅದಕ್ಕೆ ಸಹಿ ಮಾಡಿರುತ್ತೇನೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ.

ಸಾಕ್ಷಿಯನ್ನು ಪಿಡಬ್ಲೂ-1 ಎಂದು ವಿಚಾರಣೆ ಮಾಡಲಾಯಿತು.

ಸಾಕ್ಷಿಯು ವಿಶೇಷ ಭೂ ಸ್ವಾ ಧೀನ ಅಧಿಕಾರಿಗಳು ಮಾಡಿದ ಆದೇಶವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಠಾರಾವು ನಕಲಿನ ದೃಡೀಕೃತ ಪ್ರತಿಯನ್ನು ಹಾಜುರಪಡಿಸಿದ್ದು ಅದನ್ನು ನಿಪಿ-2 ಎಂದು, ತೆರಿಗೆ ನಿರ್ದರಣ ಪಟ್ಟಿಯ (2 ನಕಲುಗಳು) ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯಿತಿ ಇವರ ನ್ಯಾಯಾಲಯದಲ್ಲಿ ಆದ ಆದೇಶದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, 6 ಪೊಟೋಗಳನ್ನು ಹಾಜರುಮಾಡಿದ್ದು ಅವುಗಳನ್ನು ಕ್ರಮವಾಗಿ ನಿಪಿ-5 ರಿಂದ ನಿಪಿ-10 ಎಂದು , ಒಂದು ಸಿಡಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 11 ಎಂದು, ಪೋಟೋ ಬಿಲ್ಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಯಿತು.

ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಿ ಮುದೂಡಲಾಯಿತು

(ತೆರೆದ ನ್ಯಾಯಾಲಯದದಲ್ಲಿ ನನ್ನ ಹೇಳಿಕೆಯ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಹೆ ಪ್ರ ದ ನ್ಯಾ ದಂ ನ್ಯಾ ಬೈಲಹೊಂಗಲ